2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ
ಚಿಕ್ಕಮಗಳೂರು

<u>ಸತ್ರ ಮೊಕದ್ದಮೆ ನಂಃ**48/2015**</u>

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಗಿರೀಶ್ ಕೆ ಎನ್ | ಪಿಡಬ್ಲೂ - 17 |
| ತಂದೆಯ ಹೆಸರು | - | ನಾಗರಾಜು | ಸಿಡಬ್ಲೂ - 27 |
| ವಯಸ್ಸು | - | 37 ವರ್ಷ | |
| ಉದ್ಯೋಗ | - | ಪಿ ಎಸ್ ಐ, ಸಿ ಐ ಡಿ ಅರಣ್ಯ ಘಟಕ, ಚಾಮರಾಜನಗರ | |
| ವಾಸ ಸ್ಥಳ | - | ಚಾಮರಾಜನಗರ | |

ದಿನಾಂಕಃ 23.11.2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ನಾನು ಡಿಸೆಂಬರ್ 2012 ರಿಂದ ಮೇ 2015 ರವರೆಗೆ ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಆರಕ್ಷಕ ಉಪನಿರೀಕ್ಷಕನಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 20.11.2015 ರಂದು ಸಂಜೆ 7.00 ಗಂಟೆ ಸಮಯದಲ್ಲಿ ನಾನು ಠಾಣೆಯಲ್ಲಿ ಇದ್ದ ಸಮಯದಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆ 15/**2015** ರಲ್ಲಿ ಐಪಿಸಿ ಕಲಂ **302** ರೀತಿ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ

ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ನಾನು ದಾಖಲು ಮಾಡಿದ್ದ ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ.30 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.30 (ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.28 ರವರಿಗೆ ನೀಡಿರುತ್ತೇನೆ.

<u>ಪಾಟೀ ಸವಾಲುಃ ಶ್ರೀ ಬಿ ಎಂ ಎಲ್ ಜಿ ವಕೀಲರಿಂದ – ಆರೋಪಿ ಪರವಾಗಿ</u>

3. ನೀವು ಹೇಳಿದಂತೆ ಚಾಸಾ.1 ರವರು ಠಾಣೆಗೆ ಹಾಜರಾಗಿ ನಿಮಗೆ ನಿಪಿ.1 ರಂತೆ ದೂರನ್ನು ನೀಡಿಲ್ಲ ಎಂದರೆ ಸರಿಯಲ್ಲ. ನೀವು ಹೇಳಿದಂತೆ ಪಿರ್ಯಾದಿ ಠಾಣೆಗೆ ಹಾಜರಾಗಿ ಯಾವುದೇ ದೂರನ್ನು ನೀಡದೇ ಇದ್ದರೂ ಸಹ ಆರೋಪಿಯ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಸಾಕ್ಷಿಯ ಸಹಿ

ಚಿಕ್ಕಮಗಳೂರು.